# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಿಶೇಷ ಅಭಿವೃದ್ಧಿ ಯೋಜನೆ ಅಡಿಯಲ್ಲಿ, ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಆಲೂರು-ಪಿಟ್ಲಳ್ಳಿ ಗ್ರಾಮಗಳ ಮಧ್ಯೆ ವೇದಾವತಿ ನದಿಗೆ ಅಡ್ಡಲಾಗಿ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಿಸುವ ಕಾಮಗಾರಿಯ ರೂ.15.66 ಕೋಟಿ ಮೊತ್ತದ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

*****

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಪಿಡಿಎಸ್ 32 ಎಸ್ ಡಿ ಪಿ 2020, ದಿನಾಂಕ:05.10.2020.
2. ವ್ಯವಸ್ಥಾಪಕ ನಿರ್ದೇಶಕರು, ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತ ರವರ ಪತ್ರ ಸಂಖ್ಯೆ: ವಿ.ಜೆ.ಎನ್.ಎಲ್:ತಾಂವಿ:ತಾಂಸ-1:ಸಇಂ-3:2020-21:1901: ದಿನಾಂಕ:13/20.11 2020.

ಪ್ರಸ್ತಾವನೆ:

ಮೇಲೆ ಓದಲಾದ (1) ರ ಆದೇಶದಲ್ಲಿ, 2020-21ನೇ ಸಾಲಿನ ವಿಶೇಷ ಅಭಿವೃದ್ಧಿ ಯೋಜನೆಯ ಕ್ರಿಯಾ ಯೋಜನೆಯಲ್ಲಿ, ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಆಲೂರು-ಪಿಟ್ಲಳ್ಳಿ ಗ್ರಾಮಗಳ ಮಧ್ಯೆ ವೇದಾವತಿ ನದಿಗೆ ಅಡ್ಡಲಾಗಿ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಿಸುವ ಕಾಮಗಾರಿಗೆ ರೂ.500.00 ಲಕ್ಷಗಳ ಅನುದಾನದ ಹಂಚಿಕೆ ಮಾಡಲಾಗಿರುತ್ತದೆ.

ಮೇಲೆ ಓದಲಾದ (2) ರ ಪತ್ರದಲ್ಲಿ, ವ್ಯವಸ್ಥಾಪಕ ನಿರ್ದೇಶಕರು, ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತ ರವರು, ವಿಶೇಷ ಅಭಿವೃದ್ಧಿ ಯೋಜನೆ ಅಡಿಯಲ್ಲಿ, ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಆಲೂರು - ಪಿಟ್ಲಳ್ಳಿ ಗ್ರಾಮಗಳ ಮಧ್ಯೆ ವೇದಾವತಿ ನದಿಗೆ ಅಡ್ಡಲಾಗಿ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಿಸುವ ಕಾಮಗಾರಿಯನ್ನು ಕೈಗೊಳ್ಳಲು ಯೋಜಿಸಲಾಗಿರುತ್ತದೆ ಎಂದು ವರದಿಸಿರುತ್ತಾರೆ. ಸದರಿ ಕಾಮಗಾರಿಯಡಿ 139.40 ಮೀ ಉದ್ದದ ಬ್ರಿಡ್ಜ್, 2.689 ಎಂಸಿಎಫ್ ಟಿ ಶೇಖರಣಾ ಸಾಮರ್ಥ್ಯದ ಬ್ಯಾರೇಜ್ ನಿರ್ಮಾಣ, ಆಲೂರು ಗ್ರಾಮದ ಕಡೆ 2000 ಮೀ ಉದ್ದದ ಮತ್ತು ಪಿಟ್ಲಳ್ಳಿ ಗ್ರಾಮದ ಕಡೆ 900 ಮೀ ಉದ್ದದ ಸಂಪರ್ಕ ರಸ್ತೆ ಮತ್ತು ಸೋಪಾನಮ್ ಹಾಗೂ ramp ನಿರ್ಮಾಣ ಕೈಗೊಳ್ಳಲು ಪರಿಗಣಿಸಲಾಗಿರುತ್ತದೆ ಎಂದು ತಿಳಿಸಿರುತ್ತಾರೆ.

ಮುಂದುವರೆದು, ವ್ಯವಸ್ಥಾಪಕ ನಿರ್ದೇಶಕರು, ಸದರಿ ಕಾಮಗಾರಿಯ ಅಂದಾಜು ಪಟ್ಟಿಗೆ ದಿನಾಂಕ: 04.02.2020 ರಂದು ಜರುಗಿದ ನಿಗಮದ ಅಂದಾಜು ಪರಿಶೀಲನಾ ಸಮಿತಿಯ 32ನೇ ಸಭೆಯಲ್ಲಿ ಕೆಲವು ಷರತ್ತುಗಳಿಗೊಳಪಟ್ಟು ಸರ್ಕಾರದಿಂದ ಆಡಳಿತಾತ್ಮಕ ಅನುಮೋದನೆ ಪಡೆಯಲು ತೀರುವಳಿ ನೀಡಲಾಗಿದೆ ಎಂದು ತಿಳಿಸಿರುತ್ತಾರೆ. ಅಂದಾಜು ಪರಿಶೀಲನಾ ಸಮಿತಿಯ ಶಿಫಾರಸ್ಸಿನಂತೆ ದಿನಾಂಕ:05.10.2020 ರಂದು ನಡೆದ

ನಿಗಮದ ನಿರ್ದೇಶಕರ ಮಂಡಳಿಯ 15ನೇ ಸಭೆಯಲ್ಲಿ ಮಂಡಿಸಲಾಗಿದ್ದು, ಸಭೆಯ ನಿರ್ಣಯದನ್ವಯ ವಿಶೇಷ ಅಭಿವೃದ್ಧಿ ಯೋಜನೆ ಅಡಿಯಲ್ಲಿ, ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಆಲೂರು - ಪಿಟ್ಲಳ್ಳಿ ಗ್ರಾಮಗಳ ಮಧ್ಯೆ ವೇದಾವತಿ ನದಿಗೆ ಅಡ್ಡಲಾಗಿ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಿಸುವ ಕಾಮಗಾರಿಯ ರೂ.15.66 ಕೋಟಿ ಮೊತ್ತದ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 161 VBYE 2020, ಬೆಂಗಳೂರು,**

**ದಿನಾಂಕ:17.12.2021.**

ವಿಶೇಷ ಅಭಿವೃದ್ಧಿ ಯೋಜನೆ ಅಡಿಯಲ್ಲಿ, ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಆಲೂರು-ಪಿಟ್ಲಳ್ಳಿ ಗ್ರಾಮಗಳ ಮಧ್ಯೆ ವೇದಾವತಿ ನದಿಗೆ ಅಡ್ಡಲಾಗಿ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಿಸುವ ಕಾಮಗಾರಿಯ ರೂ.15.66 ಕೋಟಿ ಮೊತ್ತದ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ ಆಇ 417 ಆಕೋ-1 2020 (ಇ-ಆಫೀಸ್), ದಿನಾಂಕ:24.08.2021 ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಟಿಪ್ಪಣಿ ಸಂಖ್ಯೆ ಪಿಡಿ 32 ಎಸ್‌ಡಿಪಿ 2020 (ಜಲಸಂಪನ್ಮೂಲ), ದಿನಾಂಕ:21.09.2021 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ.ಜಯಚಂದ್ರರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-4)
ಜಲ ಸಂಪನ್ಮೂಲ ಇಲಾಖೆ.

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಸರ್ಕಾರಿ ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು ಇವರಿಗೆ ಮುಂದಿನ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಗೊಳಿಸುವಂತೆ ಹಾಗೂ ಪ್ರಕಟಿಸಿದ 100 ಪ್ರತಿಗಳನ್ನು ಇಲಾಖೆಗೆ ಕಳುಹಿಸಿಕೊಡುವಂತೆ ಕೋರಲಾಗಿದೆ.

**ಪ್ರತಿಯನ್ನು:**

1) ಮಹಾಲೇಖಪಾಲರು (ಎ & ಇ ) ಕರ್ನಾಟಕ, ಬೆಂಗಳೂರು.
2) ಮಹಾಲೇಖಪಾಲರು (ಇ & ಆರ್ ಎಸ್ ಎ ) ಕರ್ನಾಟಕ, ಬೆಂಗಳೂರು.
3) ಮಹಾಲೇಖಪಾಲರು (ಜಿ & ಎಸ್ ಎಸ್ ಎ ) ಕರ್ನಾಟಕ, ಬೆಂಗಳೂರು.
4) ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.

5) ಸರ್ಕಾರದ ಜಂಟಿ ಕಾರ್ಯದರ್ಶಿ (ಸಚಿವ ಸಂಪುಟ ಶಾಖೆ), ವಿಧಾನಸೌಧ, ಬೆಂಗಳೂರು (ಸಚಿವ ಸಂಪುಟ ಸಂಖ್ಯೆ :ಸಿ: 427/2021 ದಿನಾಂಕ:08.11.2021 ರ ಮೇರೆಗೆ)
6) ಮಾನ್ಯ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
7) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
8) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
9) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಯೋಜನೆ ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
10) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರು, ಜಲಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
11) ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರು, ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
12) ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
13) ವ್ಯವಸ್ಥಾಪಕ ನಿರ್ದೇಶಕರು, ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತ, ಬೆಂಗಳೂರು.
14) ಪ್ರಧಾನ ಇಂಜಿನಿಯರ್, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಆನಂದ್ ರಾವ್ ವೃತ್ತ, ಬೆಂಗಳೂರು.
15) ಮುಖ್ಯ ಇಂಜಿನಿಯರ್, ಭದ್ರಾ ಮೇಲ್ದಂಡೆ ಯೋಜನಾ ವಲಯ, ಚಿತ್ರದುರ್ಗ.
16) ವಿಶೇಷಾಧಿಕಾರಿ ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಲೋಕೋಪಯೋಗಿ ಇಲಾಖೆ (ಆರ್ಥಿಕ ಕೋಶ), ವಿಧಾನಸೌಧ, ಬೆಂಗಳೂರು.
17) ಸರ್ಕಾರದ ಉಪ ಕಾರ್ಯದರ್ಶಿ (ಕೆಬಿಜೆಎನ್/ಸೇವೆಗಳು), ಜಲಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
18) ನಿರ್ದೇಶಕರು, ರಾಜ್ಯ ಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು, 10 ಪ್ರತಿಗಳು.
19) ಸರ್ಕಾರದ ವಿಶೇಷ ಕರ್ತವ್ಯಾಧಿಕಾರಿ, ತಾಂತ್ರಿಕ-3,
20) ಸರ್ಕಾರದ ಅಧೀನ ಕಾರ್ಯದರ್ಶಿಗಳು, ತಾಂತ್ರಿಕ-2/ತಾಂತ್ರಿಕ-1/ತಾಂತ್ರಿಕ-5 ಜಲಸಂಪನ್ಮೂಲ ಇಲಾಖೆ, ವಿಕಾಸ ಸೌಧ, ಬೆಂಗಳೂರು.
21) ತಾಂತ್ರಿಕ ಸಹಾಯಕರು ತಾಂತ್ರಿಕ-6/ತಾಂತ್ರಿಕ-7, ಜಲಸಂಪನ್ಮೂಲ ಇಲಾಖೆ, ವಿಕಾಸ ಸೌಧ, ಬೆಂಗಳೂರು.
22) ಶಾಖಾ ರಕ್ಷಾ ಕಡತ/ ಹೆಚ್ಚಿನ ಪ್ರತಿ.

******